# ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ.ರವರ ನ್ಯಾಯಾಲಯ,

# ಟಿ. ನರಸೀಪುರ.

# ಸಿ. ಸಿ ನಂ. 2251/2025

ಪಿರ್ಯಾದಿದಾರರು : ಸರ್ಕಾರ ಪರವಾಗಿ ಬನ್ನೂರು ಪೊಲೀಸ್ ಠಾಣೆ

ವಿರುದ್ಧ

ಆರೋಪಿತರು : 1. ಪ್ರದೀಪ ಬಿನ್ ರಾಜೇಗೌಡ, 38 ವರ್ಷ,

2. ಶ್ರೀಕಂಠ ಬಿನ್ ನಂಜೇಗೌಡ, 52 ವರ್ಷ,

ಇಬ್ಬರ ವಾಸಃ ತ್ಯಾಗರಾಜ ಮೋಹಲ್ಲಾ, ಬನ್ನೂರು ಟೌನ್, ಟಿ.ನರಸೀಪುರ ತಾಲ್ಲೂಕು, ಮೈಸೂರು ಜಿಲ್ಲೆ.

3. ರಾಜೇಗೌಡ ಬಿನ್ ಲೇಟ್ ಕೆಂಪೇಗೌಡ, 77 ವರ್ಷ, ವಾಸಃ ಬನ್ನೂರು ಟೌನ್, ಟಿ.ನರಸೀಪುರ ತಾಲ್ಲೂಕು, ಮೈಸೂರು ಜಿಲ್ಲೆ.

## ದೋಷಾರೋಪಣೆ

**ಶ್ರೀ ಸಚಿನ್ ಹೆಚ್.ಆರ್, ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ, ಟಿ.ನರಸೀಪುರ, ಆದ ನಾನು ಮೇಲ್ಕಂಡ ಆರೋಪಿಯಾದ ನಿಮ್ಮ ಮೇಲೆ ಕೆಳಕಂಡಂತೆ ದೋಷಾರೋಪಣೆಯನ್ನು ಮಾಡುತ್ತೇನೆ.**

ನಿಮ್ಮ ಮೇಲೆ ಹೊರಿಸಲಾದ ದೋಷಾರೋಪಣೆ ಏನೆಂದರೆ

ದಿನಾಂಕ 16.12.2024 ರಂದು ಮಧ್ಯಾಹ್ನ 3.00 ಗಂಟೆ ಸಮಯದಲ್ಲಿ ಬನ್ನೂರು ಪೋಲೀಸ್ ಠಾಣಾ ವ್ಯಾಪ್ತಿಯ ಬನ್ನೂರು ಟೌನ್ ತ್ಯಾಗರಾಜನಗರ ಆಲಪ್ಪನ ಅಂಗಡಿ ಬೀದಿಯಲ್ಲಿರುವ ಚಾಸಾ-1 ಸತೀಶರವರ ಖಾಲಿ ನಿವೇಶನದಲ್ಲಿ ಚಾಸಾ-1 ರಿಂದ 4 ಸತೀಶ, ಶ್ರೀದರ್, ಪುಷ್ಪ, ಕವಿತ ರವರು ಸ್ವಚ್ಚ ಮಾಡುವಾಗ ಅಲ್ಲಿಗೆ ಬಂದ ಆರೋಪಿತರಾದ ನೀವು ಸಮಾನ ಉದ್ದೇಶ ಹೊಂದಿ, ನಿಮ್ಮ ಪೈಕಿ 1 ರಿಂದ 3 ನೇ ಆರೋಪಿತರಾದ ನೀವು ಚಾಸಾ-1 ರಿಂದ 4 ರವರಿಗೆ ಬೋಳಿ ಮಗನೆ, ಸೂಳೆ ಮಗನೆ ಎಂದು ಅವಾಚ್ಯ ಶಬ್ದಗಳಿಂದ ನಿಂದಿಸಿದ್ದು, ಆ ಮೂಲಕ

ಆರೋಪಿಗಳಾದ ನೀವು ಭಾರತೀಯ ನ್ಯಾಯ ಸಂಹಿತೆ ಕಲಂ.352 ಸಹವಾಚಕ 3(5) ರನ್ವಯ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುತ್ತೀರಿ.

ಎರಡನೇಯದಾಗಿ, ಮೇಲೆ ಹೇಳಿದ ದಿನಾಂಕ, ಸಮಯ ಹಾಗೂ ಸ್ಥಳದಲ್ಲಿ ಆರೋಪಿಗಳಾದ ನೀವು ಸಮಾನ ಉದ್ದೇಶದಿಂದ ನಿಮ್ಮ ಪೈಕಿ 2 ನೇ ಆರೋಪಿಯಾದ ನೀವು ಚಾಸಾ-1 ರವರನ್ನು ಮತ್ತು 3 ನೇ ಆರೋಪಿಯಾದ ನೀವು ಚಾಸಾ-2 ರವನ್ನು ತಬ್ಬಿ ಹಿಡಿದು ಅಕ್ರಮ ತಡೆ ಉಂಟು ಮಾಡಿದ್ದು, ಆ ಮೂಲಕ ಆರೋಪಿಗಳಾದ ನೀವು ಭಾರತೀಯ ನ್ಯಾಯ ಸಂಹಿತೆ ಕಲಂ.126(2) ಸಹವಾಚಕ 3(5) ರನ್ವಯ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುತ್ತೀರಿ.

ಮೂರನೇಯದಾಗಿ, ಮೇಲೆ ಹೇಳಿದ ದಿನಾಂಕ, ಸಮಯ ಹಾಗೂ ಸ್ಥಳದಲ್ಲಿ ಆರೋಪಿಗಳಾದ ನೀವು ಸಮಾನ ಉದ್ದೇಶದಿಂದ ನಿಮ್ಮ ಪೈಕಿ 2 ಮತ್ತು 3 ನೇ ಆರೋಪಿತರು ಚಾಸಾ-1 ಮತ್ತು 2 ರವರನ್ನು ಕೈಗಳಿಂದ ಹೊಡೆದು ಕಾಲಿನಿಂದ ಒದ್ದು ಸಾಮಾನ್ಯ ಸ್ವರೂಪದ ಗಾಯವನ್ನುಂಟು ಮಾಡಿದ್ದು, ಆ ಮೂಲಕ ಆರೋಪಿಗಳಾದ ನೀವು ಭಾರತೀಯ ನ್ಯಾಯ ಸಂಹಿತೆ ಕಲಂ.115(2) ಸಹವಾಚಕ 3(5) ರನ್ವಯ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುತ್ತೀರಿ.

ಕೊನೆಯದಾಗಿ, ಮೇಲೆ ಹೇಳಿದ ದಿನಾಂಕ, ಸಮಯ ಹಾಗೂ ಸ್ಥಳದಲ್ಲಿ ಆರೋಪಿಗಳಾದ ನೀವು ಸಮಾನ ಉದ್ದೇಶದಿಂದ ಚಾಸಾ-1 ರಿಂದ 4 ರವರೊಂದಿಗೆ ಜಗಳ ತೆಗೆದು ಚಾಸಾ-1 ರಿಂದ 4 ರವರಿಗೆ ಕೊಲೆ ಬೆದರಿಕೆ ಹಾಕಿದ್ದು, ಆ ಮೂಲಕ ಆರೋಪಿಗಳಾದ ನೀವು ಭಾರತೀಯ ನ್ಯಾಯ ಸಂಹಿತೆ ಕಲಂ.351(2), 351(3) ಸಹವಾಚಕ 3(5) ರನ್ವಯ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುತ್ತೀರಿ.

ಮೇಲೆ ಹೇಳಿದ ಅಪರಾಧಗಳಿಗಾಗಿ ನೀವು ಈ ನ್ಯಾಯಾಲಯದಲ್ಲಿ ವಿಚಾರಣೆಗೆ ಒಳಪಡತಕ್ಕದ್ದು.

ದಿನಾಂಕಃ **17.03.2026.**

**(ಸಚಿನ್ ಹೆಚ್.ಆರ್)**
**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾದಂ.**
**ಟಿ. ನರಸೀಪುರ.**

## **ಆರೋಪಿತರ ಹೇಳಿಕೆ**

ಪ್ರಶ್ನೆ-1 ಈಗ ಓದಿ ಹೇಳಿದ ಆರೋಪಣೆಯನ್ನು ಅರ್ಥ ಮಾಡಿಕೊಂಡಿರಾ ?

ಉತ್ತರಃ 1 ನೇ ಆರೋಪಿಃ

2 ನೇ ಆರೋಪಿಃ

3 ನೇ ಆರೋಪಿಃ

ಪ್ರಶ್ನೆ-2 ಮೇಲೆ ಹೇಳಿದ ಆರೋಪಣೆಯನ್ನು ಒಪ್ಪಿಕೊಳ್ಳುವಿರಾ ? ಅಥವಾ ವಿಚಾರಣೆ ಆಗಬೇಕೆನ್ನುವಿರಾ?

ಉತ್ತರಃ 1 ನೇ ಆರೋಪಿಃ

2 ನೇ ಆರೋಪಿಃ

3 ನೇ ಆರೋಪಿಃ

**(ಮೇಲ್ಕಂಡ ಆರೋಪಣೆಯನ್ನು ಆರೋಪಿತರಿಗೆ ತಿಳಿದ ಭಾಷೆಯಲ್ಲಿ ತೆರೆದ ನ್ಯಾಯಾಲಯದಲ್ಲಿ ಓದಿ ಹೇಳಿ ಅವರು ಕೊಟ್ಟ ಉತ್ತರವನ್ನು ಬರೆದು ಕೊಂಡಿದ್ದು ಅವು ಸರಿಯಾಗಿರುತ್ತದೆ ಎಂದು ಈ ಮೂಲಕ ದೃಢೀಕರಿಸುತ್ತೇನೆ.)**

**(ಸಚಿನ್ ಹೆಚ್.ಆರ್)**
**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು**
**ಜೆ.ಎಂ. ಎಫ್.ಸಿ., ಟಿ.ನರಸೀಪುರ.**

**ಆರೋಪಿತರ ಸಹಿ**

1 ನೇ ಆರೋಪಿಃ

2 ನೇ ಆರೋಪಿಃ

3 ನೇ ಆರೋಪಿಃ